# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಕಾರ್ಯಕಲಾಪಗಳ ಪಟ್ಟಿ**

**ಬುಧವಾರ, ದಿನಾಂಕ: 10ನೇ ಮಾರ್ಚ್, 2021**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01.ನೂತನ ಸದಸ್ಯರ ಪ್ರಮಾಣ ವಚನ

## 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

8ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಂ.ಎ.ಗೋಪಾಲಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 108 (756) : ಮಾನ್ಯ ಕಂದಾಯ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಶ್ರೀ ಬಿ.ಎಸ್. ಯಡಿಯೂರಪ್ಪ** (ಮುಖ್ಯಮಂತ್ರಿಗಳು) ಅವರು:-

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ 2019-2020ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ I ಮತ್ತು II) ಸಭೆಯ ಮುಂದಿಡುವುದು.

## 04. ಗಮನ ಸೆಳೆಯುವ ಸೂಚನೆಗಳು

**ಅ)** **ಶ್ರೀ ಎನ್.ರವಿಕುಮಾರ್** ಅವರು 2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ 62 ನರ್ಸಿಂಗ್ ಮತ್ತು 40 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳನ್ನು ಪ್ರಾರಂಭಿಸಲು ಅವಶ್ಯವಿರುವ ಮೂಲಭೂತ ಸೌಕರ್ಯ ಹಾಗೂ ಬೋಧಕ ಸಿಬ್ಬಂದಿಗಳ ಕೊರತೆ ಇದ್ದರೂ ಕೂಡ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

**ಆ)** **ಶ್ರೀ ಕೆ. ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ಭಾಗದಲ್ಲಿ ಮೀನುಗಾರ ಸರ್ವತೋಮುಖ ಅಭಿವೃದ್ಧಿಗೆ ನಿರ್ದಿಷ್ಟ ಕಾಲಮಿತಿಯಲ್ಲಿ ಯೋಜನೆಗಳನ್ನು ಜಾರಿಗೊಳಿಸುವ ಕುರಿತು ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

...2

ಇ) **ಶ್ರೀ ಶಶೀಲ್ ಜಿ. ನಮೋಶಿ** ಅವರು ಹೈದ್ರಾಬಾದ್-ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶಾಭಿವೃದ್ಧಿಗೆ ಸಂಬಂಧಿಸಿದಂತೆ ಭಾರತ ಸಂವಿಧಾನದ ಅನುಚ್ಛೇದ 371(ಜೆ)ಗೆ ತಂದಿರುವ ತಿದ್ದುಪಡಿಯು ಸಮರ್ಪಕವಾಗಿ ಜಾರಿಯಾಗದಿರುವುದರಿಂದ ಹೈದ್ರಾಬಾದ್-ಕರ್ನಾಟಕ ಪ್ರದೇಶದ ವಿದ್ಯಾರ್ಥಿಗಳು/ನಿರುದ್ಯೋಗಿಗಳು ತೊಂದರೆ ಅನುಭವಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

ಅ) **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು,** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದ ಖಾನಾಪುರ ತಾಲ್ಲೂಕಿನ ನೇರಸೆ, ಶಿರೊಳಿ ಹಾಗೂ ಇತರೆ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಜನರು ಮೂಲಭೂತ ಸೌಲಭ್ಯಗಳಿಲ್ಲದೆ ಶೋಚನೀಯ ಸ್ಥಿತಿ ಎದುರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು.

ಆ) **ಶ್ರೀ ಹೆಚ್.ಎಂ.ರಮೇಶ್‌ಗೌಡ** ಅವರು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ತೈಲಗೆರೆ ಗ್ರಾಮದ ಸರ್ವೆ. ನಂ.110ರಲ್ಲಿ ಅಕ್ರಮವಾಗಿ ಕಲ್ಲುಗಾಣಿಗಾರಿಕೆ ಮತ್ತು ಮರಳು ಗಣಿಗಾರಿಕೆ ನಡೆಯುತ್ತಿರುವುದರಿಂದ ಅಲ್ಲಿನ ರೈತರು ಬೆಳೆಯುವ ಬೆಳೆಗಳ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

## 06. ವಿತ್ತೀಯ ಕಾರ್ಯಕಲಾಪ

2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ:**<br>ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು,<br>ಎಂ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು,<br>ಕೆ. ಪ್ರತಾಪಚಂದ್ರ ಶೆಟ್ಟಿ,<br>ನಸೀರ್ ಅಹಮದ್,<br>ಬಸವರಾಜ ಪಾಟೀಲ್ ಇಟಗಿ,<br>ಕೆ. ಹರೀಶ್ ಕುಮಾರ್,<br>ಆರ್. ಪ್ರಸನ್ನಕುಮಾರ್ ಮತ್ತು<br>ಪ್ರಕಾಶ್ ಕೆ. ರಾಥೋಡ್ ಅವರುಗಳು | ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ಸರಹದ್ದಿನಲ್ಲಿ ಬರುವ ಹಿರೇನಾಗವಲ್ಲಿ ಗ್ರಾಮದ ಬಳಿ ಕಾನೂನು ಬಾಹಿರವಾಗಿ ನಡೆಯುತ್ತಿರುವ ಗಣಿಗಾರಿಕೆ ಕುರಿತು |

**ಎಸ್. ನಿರ್ಮಲ**
**ಜಂಟಿ ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**